ದಿನಾಂಕಃ **23-06-2023** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಸಲ್ಲಿಸಿರುವ ಅಂಶಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಹೇಳಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವೆಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1. ಸರ್ವೆ ನಂ. 121/2 ಎ, ಸರ್ವೆ ನಂ. 123/2 ಎ, ಸರ್ವೆ ನಂ. 131/6, ಸರ್ವೆ ನಂ. 2/4 ಇ2, ಸರ್ವೆ ನಂ. 104/1, ಸರ್ವೆ ನಂ. 199/2, ಸರ್ವೆ ನಂ. 199/1 ಕ್ಕೆ ಸಂಬಂಧಪಟ್ಟಿರುವ ಆರ್ ಟಿ ಸಿ ಗಳನ್ನು ನಿಪಿ-1 ರಿಂದ 7 ಎಂದು ಗುರುತಿಸಲಾಯಿತು.

8. ಮತ್ತಿಹಳ್ಳಿ ಗ್ರಾಮ ಪಂಚಾಯ್ತಿಯವರು ಕೊಟ್ಟಿರುವ ಅಸೆಸ್ ಮೆಂಟ್ ಎಕ್ಸ್ ಟ್ರಾಕ್ಟ್ ನ್ನು ನಿಪಿ-8 ಎಂದು ಗುರುತಿಸಲಾಯಿತು.

9. ನನ್ನ ಅತ್ತೆ ರತ್ನಮ್ಮ ರವರ ಹೆಸರಿನಲ್ಲಿ ಬರೆದುಕೊಟ್ಟಿರುವ ದೃಢೀಕೃತ ದಾನಪತ್ರವನ್ನು ನಿಪಿ-9 ಎಂದು ಗುರುತಿಸಲಾಯಿತು.

10. ಎಂ.ಸಿ ಚಂದ್ರಶೇಖರಯ್ಯ ರವರಿಗೆ ಸಂಬಂಧಪಟ್ಟಿರುವ ಮರಣ ಪ್ರಮಾಣ ಪತವನ್ನು ನಿಪಿ-10 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಪ್ರಧಾನ ಸಿವಿಲ್ ನ್ಯಾಯಾಧೀಶರು
ತಿಪಟೂರು.